ಇಲ್ಲ.

ಆ) ಹಾಗಿಲ್ಲದಿದ್ದಲ್ಲಿ ಯಾವ ಹಂತದಲ್ಲಿ ಈ ನೇಮಕಾತಿ ನಡೆಸಲಾಗುವುದು;

ಅನ್ವಯಿಸುವುದಿಲ್ಲ.

ಇ) ಇತ್ತೀಚಿನ ವರ್ಷಗಳಲ್ಲಿ ಆಯ್ಕೆಗೊಂಡ ಅಭ್ಯರ್ಥಿಗಳ ಸಂಖ್ಯೆ ಎಷ್ಟು;

ಅನ್ವಯಿಸುವುದಿಲ್ಲ.

ಈ) ರಾಜ್ಯದಲ್ಲಿರುವ ಕನ್ನಡಿಗರಿಗೆ ದೊಡ್ಡ ಉದ್ದಿಮೆಗಳಲ್ಲಿ, ತಾಂತ್ರಿಕ ಸಂಸ್ಥೆಗಳಲ್ಲಿ ಯಾವ ಪ್ರಮಾಣದಲ್ಲಿ ಉದ್ಯೋಗಾವಕಾಶವನ್ನು ಕಲ್ಪಿಸಲಾಗಿದೆ;

ಅನ್ವಯಿಸುವುದಿಲ್ಲ.

ಉ) ಹಾಗಿದ್ದಲ್ಲಿ, ಈ ಸಂಬಂಧದಲ್ಲಿ ಸರ್ಕಾರದ ಮಾರ್ಗ ಸೂತ್ರವೇನಾದರೂ ಇದೆಯೇ?

ಅನ್ವಯಿಸುವುದಿಲ್ಲ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : (259)154

ಸದಸ್ಯರ ಹೆಸರು : ಶ್ರೀ ಲಾಲಾಜಿ ಆರ್.ಮೆಂಡನ್.

ಉತ್ತರಿಸುವವರು : (ಶ್ರೀ ಜಿ.ಕರುಣಾಕರ ರೆಡ್ಡಿ) ಮಾನ್ಯ ಕಂದಾಯ ಸಚಿವರು.

ಅ) ಕಂದಾಯ ಇಲಾಖೆಯ ಭೂ ನ್ಯಾಯ ಮಂಡಳಿಗಳಲ್ಲಿ ಅಕ್ರಮ ಸಕ್ರಮ ಯೋಜನೆಯಡಿ ಒಟ್ಟು ಎಷ್ಟು ಪ್ರಕರಣಗಳು ರಾಜ್ಯದಲ್ಲಿ ಬಾಕಿ ಇರುತ್ತವೆ;

ಅಕ್ರಮ ಸಕ್ರಮ ಯೋಜನೆಯಡಿಯಲ್ಲಿ ಬಾಕಿ ಇರುವ ಅರ್ಜಿಗಳ ಸಂಖ್ಯೆ:431529.

ಆ) ಇವುಗಳ ಇತ್ಯರ್ಥಕ್ಕೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ.

ಅರ್ಜಿಗಳನ್ನು ಇತ್ಯರ್ಥ ಪಡಿಸಲು ನಿಗಧಿ ಪಡಿಸಿದ್ದ ಕಾಲಾವಧಿಯು ದಿ:26.04.2008ಕ್ಕೆ ಮುಕ್ತಾಯವಾಗಿರುತ್ತದೆ. ಈ ಅವಧಿಯನ್ನು ವಿಸ್ತರಿಸಲು ಕಾಯ್ದೆಗೆ ತಿದ್ದುಪಡಿ ತರುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆ. ಕಾಯ್ದೆಗೆ ತಿದ್ದುಪಡಿ ತಂದ ನಂತರ ಬಾಕಿ ಇರುವ ಅರ್ಜಿಗಳನ್ನು ಇತ್ಯರ್ಥ ಪಡಿಸಲು ಬಗರ್ ಹುಕುಂ ಸಕ್ರಮೀಕರಣ ಸಮಿತಿಗಳನ್ನು ರಚಿಸಲಾಗುವುದು.

ಇ) ತ್ವರಿತ ವಿಲೇವಾರಿಗೆ ಹೆಚ್ಚು ಸಮಿತಿ ಉಪ ಸಮಿತಿಗಳ ರಚನೆಯ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಇಲ್ಲ.

ಈ) ಹಾಗಿದ್ದಲ್ಲಿ ತಾಲ್ಲೂಕಿನಲ್ಲಿ ಇಂತಹ ಎಷ್ಟು ಪ್ರಕರಣಗಳು ಬಾಕಿ ಇವೆ, ಕಾಪು ಕ್ಷೇತ್ರದಲ್ಲಿ ಬಾಕಿ ಇರುವ ಪ್ರಕರಣಗಳ ಸಂಖ್ಯೆ ಎಷ್ಟು?

ಉಡುಪಿ ತಾಲ್ಲೂಕಿನಲ್ಲಿ 43801 ಪ್ರಕರಣಗಳು ಬಾಕಿ ಇವೆ, ಕಾಪು ಕ್ಷೇತ್ರದಲ್ಲಿ 2350 ಪ್ರಕರಣಗಳು ಬಾಕಿ ಇವೆ.

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	**(260)155**
2. ಸದಸ್ಯರ ಹೆಸರು	:	**ಶ್ರೀ ಲಾಲಾಜಿ ಆರ್. ಮೆಂಡನ್ (ಕಾಪು)**
3. ವಿಷಯ	:	**ಕಾಪು ತಾಲ್ಲೂಕು ಕೇಂದ್ರವಾಗಿ ಪರಿವರ್ತನೆಗೊಳಿಸುವುದು.**
4. ಉತ್ತರಿಸುವ ಸಚಿವರು	:	**ಕಂದಾಯ ಸಚಿವರು (ಶ್ರೀ ಕರುಣಾಕರ ರೆಡ್ಡಿ)**

(ಅ) ಕಾಪು ವಿಧಾನ ಸಭಾ ಕ್ಷೇತ್ರದ ಪುನರ್ ವಿಂಗಡನಾ ಪ್ರದೇಶವನ್ನು ಕಾಪು ತಾಲ್ಲೂಕನ್ನಾಗಿ ಪರಿವರ್ತಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?

ಸರ್ಕಾರವು ರಾಜ್ಯದಲ್ಲಿ ಹೊಸ ತಾಲ್ಲೂಕುಗಳನ್ನು ರಚಿಸುವ ಬಗ್ಗೆ ಪರಿಶೀಲಿಸುತ್ತಿದೆ. ಈ ಬಗ್ಗೆ ತಜ್ಞರ ಸಮಿತಿಯನ್ನು ನೇಮಿಸಲಾಗಿದ್ದು, ಅದರ ವರದಿ ಬಂದ ನಂತರ ಅದನ್ನು ಸಮಗ್ರವಾಗಿ ಪರಿಶೀಲಿಸಿದ ನಂತರ ಹೊಸ ತಾಲ್ಲೂಕುಗಳ ರಚನೆ ಬಗ್ಗೆ ಕ್ರಮ ತೆಗೆದುಕೊಳ್ಳಲಾಗುವುದು.

ಕಾಪುವನ್ನು ತಾಲ್ಲೂಕು ಕೇಂದ್ರವನ್ನಾಗಿ ಮಾಡುವ ಬಗ್ಗೆ ಮನವಿಗಳು ಬಂದಲ್ಲಿ ಪರಿಶೀಲಿಸಲಾಗುವುದು.

(ಆ) ಗ್ರಾಮ ಪಂಚಾಯತ್‌ಗಳಲ್ಲಿ ದೊಡ್ಡ ಗ್ರಾಮ ಪಂಚಾಯತ್‌ಗಳನ್ನು ಪಟ್ಟಣ ಪಂಚಾಯತ್‌ಯನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಕಾರ್ಯ ಯೋಜನೆಯಲ್ಲಿದೆಯೇ?

ಕರ್ನಾಟಕ ಪುರಸಭೆ ಕಾಯ್ದೆ 1964ರ ಕಲಂ 349ರನ್ವಯ ಸಂಬಂಧಪಟ್ಟ ಜಿಲ್ಲಾಧಿಕಾರಿಯವರಿಂದ ನಗರಾಭಿವೃದ್ಧಿ ಇಲಾಖೆಗೆ ಬಂದಂತಹ ಪ್ರಸ್ತಾವನೆಯನ್ನು ನಿಯಮಾನುಸಾರ ಪರಿಶೀಲಿಸಲಾಗುತ್ತದೆ.